# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಛೇರಿ ಶಿವಾಜಿನಗರ ಉಪವಿಭಾಗ ಹಲಸೂರು ಕೆರೆರಸ್ತೆ, ಬೆಂಗಳೂರು-42**

---

ಸಂಖ್ಯೆ:ಸ.ಇಂ/ವಾ-91/ವಾರ್ಡ್‌ಸಭೆ/07/2022-23 ದಿನಾಂಕ:20-08-2022

\

**ವಾರ್ಡ್-91 ರ ವಾರ್ಡ್ ಸಭೆಯ ನಡವಳ**

ದಿನಾಂಕ: 20-08-2022 ರಂದು ಶಿವಾಜಿನಗರ ಉಪ ವಿಭಾಗ ವಾರ್ಡ್-91, ಭಾರತಿನಗರ ವಾರ್ಡ್ ಕಛೇರಿಯಲ್ಲಿ ಶ್ರೀ.ಪದ್ಮರಾಜ್, ವಾರ್ಡ್-91 ರ ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭಾ ನಡವಳ.

**ಹಾಜರಿದ್ದವರು:**

| ಕ್ರಮ ಸಂಖ್ಯೆ | ಸದಸ್ಯರ ಹೆಸರು | ಪದನಾಮ / ಇಲಾಖೆ |
|---|---|---|
| 1 | ಶ್ರೀ ಪದ್ಮರಾಜ್ | ಸಹಾಯಕ ಕಾರ್ಯಪಾಲಕ ಅಭಿಯಂತರರು (ಯೋಜನೆ ಪೂರ್ವ) ಹಾಗೂ ನೋಡಲ್ ಅಧಿಕಾರಿ ವಾರ್ಡ್-91 |
| 2 | ಶ್ರೀ ಪ್ರವೀಣ್.ಎನ್.ಎಂ. | ಸಅ ಹಾಗೂ ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್ ಸಂಖ್ಯೆ:91 |

**ಮಾನ್ಯ ನೋಡಲ್ ಅಧಿಕಾರಿರವರು ಸ್ವಾಗತದೊಂದಿಗೆ ಅಧಿಕಾರಿಗಳ / ಹಾಜರಿದ್ದವರ ಪರಸ್ಪರ ಪರಿಚಯದೊಂದಿಗೆ ಸಭೆಯನ್ನು ಪ್ರಾರಂಬಿಸಲಾಯಿತು.**

- ವಾರ್ಡಿನಲ್ಲಿ ತಳ್ಳುವ ಗಾಡಿಗಳ ಕೊರತೆ ಇದ್ದು, ಸರಿಯಾಗಿ ಕಸ ವಿಲೇವಾರಿಯಾಗುತಿಲ್ಲದಿರುವುದು ಕಂಡು ಬಂದಿದ್ದು ಇದರ ಬಗ್ಗೆ ಸಾರ್ವಜನಿಕರಿಂದ ಸಾಕಷ್ಟು ದೂರು ಬಂದಿರುತ್ತದೆ ಹಾಗೂ ಪೌರಕಾರ್ಮಿಕರನ್ನು ವಿಚಾರಿಸಿದ್ದಲ್ಲಿ ಅವರಿಗೆ ತಳ್ಳುವ ಗಾಡಿ (Push Cart) ಕೊರತೆ ಇದ್ದು ಆದಷ್ಟು ಬೇಗ ಇವರಿಗೆ ತಳ್ಳುವ ಗಾಡಿ (Push Cart) ನೀಡಲು ಸೂಚಿಸಿದೆ.

**ಸಹಾಯಕ ಕಾರ್ಯಪಾಲಕ ಅಭಿಯಂತರರು (ಘನತ್ಯಾಜ್ಯ ಶಿವಾಜಿನಗರ)**

- ದಿನಾಂಕ: 29-08-22 ರಿಂದ 08-09-2022 ರ ವರೆಗೆ ಚರ್ಚ್‌ನ ಸೆಂಟ್ ಮೇರೆಸ್ ಬೆಸಿಲಿಕ ವಾರ್ಷಿಕ ಫೆಸ್ಟಿವಲ್ ಶಿವಾಜಿನಗರ ಹಬ್ಬವಿರುವುದರಿಂದ ಇದಕ್ಕೆ ಸಂಬಂಧಿಸಿದಂತೆ ಚರ್ಚ್‌ನ ಸುತ್ತಮುತ್ತ ಸ್ವಚ್ಛತಾ ಕಾರ್ಯವನ್ನು ಸಮರ್ಪಕವಾಗಿ ನಿರ್ವಹಿಸುವುದು ಹಾಗು ಸಮಯಕ್ಕೆ ಸರಿಯಾಗಿ ಕಸವಿಲೇವಾರಿ ಮಾಡಲು ಮತ್ತು ಪಿ.ಕೆ ರವರಿಗೆ ಎರಡು ಪಾಳೀ (shift) ಗಳಾಗಿ ಕಾರ್ಯನಿರ್ವಹಿಸಲು ಅಗತ್ಯ ಕ್ರಮ ಕೈಗೊಳ್ಳಲು ಸೂಚಿಸಿದರು.

**ಸಹಾಯಕ ಕಾರ್ಯಪಾಲಕ ಅಭಿಯಂತರರು (ಘನತ್ಯಾಜ್ಯ ಶಿವಾಜಿನಗರ)**

- ವಾರ್ಡ್‌ಗಳಲ್ಲಿ ಬ್ಲೀಚಿಂಗ್ ಪೌಡರ್‌ಗಳ ಕೊರತೆ ಇದ್ದು ಸ್ವಚ್ಛತಾ ಕಾರ್ಯಕ್ಕೆ ಅಗತ್ಯವಿರುವುದರಿಂದ ಈ ಕೂಡಲೇ ಬ್ಲೀಚಿಂಗ್ ಪೌಡರ್‌ಗಳನ್ನು ಒದಗಿಸಲು ಅಗತ್ಯ ಕ್ರಮ ಕೈಗೊಳ್ಳಲು ಸೂಚಿಸಿರುತ್ತಾರೆ.

**ಸಹಾಯಕ ಕಾರ್ಯಪಾಲಕ ಅಭಿಯಂತರರು (ಘನತ್ಯಾಜ್ಯ ಶಿವಾಜಿನಗರ)**

- ಶಿವಾಜಿನಗರದಲ್ಲಿ ಚರ್ಚ್‌ನ ಸೆಂಟ್ ಮೇರೆಸ್ ಬೆಸಿಲಿಕ ವಾರ್ಷಿಕ ಫೆಸ್ಟಿವಲ್ ಇರುವುದರಿಂದ ಚರ್ಚ್‌ನ ಸುತ್ತಮುತ್ತ ಫುಟ್‌ಪಾತ್‌ಗಳ ಮೇಲೆ ಸ್ವಚ್ಛತಾ ಕಾಪಾಡಲು ಕಾರ್ಯವನ್ನು ಸಮರ್ಪಕವಾಗಿ ಮಾಡಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಲು ತಿಳಿಸಿದರು.

(ಪು.ತಿ.ನೊ)

- ಚರ್ಚ್‌ನ ಸೆಂಟ್ ಮೇರೆಸ್ ಬೆಸಿಲಿಕ ವಾರ್ಷಿಕ ಫೆಸ್ಟಿವಲ್ ಇರುವುದರಿಂದ ಸ್ಮಾರ್ಟ್ ಸಿಟಿರವರ ಕಾಮಗಾರಿಯು ಪ್ರಗತಿಯಲ್ಲಿದ್ದು ಸಾವಿರಾರು ಮಟ್ಟದಲ್ಲಿ ಜನರು ಸೇರುವುದರಿಂದ ಸಾರ್ವಜನಿಕರಿಗೆ ಅನುಕೂಲವಾಗುವಂತೆ ಸೂಕ್ತ ಕ್ರಮ ಕೈಗೊಳ್ಳಲು ಸಂಬಂಧಪಟ್ಟ ಸ್ಮಾರ್ಟ್ ಸಿಟಿ ಇಲಾಖೆರವರಿಗೆ ತಿಳಿಸಲು ಸೂಚಿಸಿರುತ್ತಾರೆ.

**(ಸಹಾಯಕ ಕಾರ್ಯಪಾಲಕ ಅಭಿಯಂತರರು ಬೆಂಗಳೂರು ಸ್ಮಾರ್ಟ್ ಸಿಟಿ ಲಿ.ಟಿ)**

- ಮೇಮೋರಿಯಲ್ ಪಾರ್ಕ್ ಅನ್ನು ಸೂಕ್ತ ರೀತಿಯಲ್ಲಿ ನಿರ್ವಹಣಾ ಕಾರ್ಯವನ್ನು ನಿರ್ವಹಿಸಲು ತೋಟಗಾರಿಕಾ ಇಲಾಖೆರವರಿಗೆ ಮತ್ತೋಮ್ಮೆ ತಿಳಿಸಲು ಸೂಚಿಸಿರುತ್ತಾರೆ.

**(ಅಧೀಕ್ಷಕರು ತೋಟಗಾರಿಕಾ ಇಲಾಖೆ)**

- ವಾರ್ಡ್‌ಗಳಲ್ಲಿ ಹಲವಾರು ರೀತಿಯ Flex & Banners ಗಳನ್ನು ಗುರುತಿಸಿ ಕೂಡಲೇ ತೆರವುಗೊಳಿಸುವ ಕಾರ್ಯವನ್ನು ನಿರ್ವಹಿಸಲು ಸೂಚಿಸಿದರು

.

**ಸಹಾಯಕ ಕಾರ್ಯಪಾಲಕ ಅಭಿಯಂತರರು (ಶಿವಾಜಿನಗರ) ಮತ್ತು**
**ಸಹಾಯಕ ಕಂದಾಯ ಅಧಿಕಾರಿ (ಶಿವಾಜಿನಗರ)**

- ಅಂತಿಮವಾಗಿ ಅಧ್ಯಕ್ಷರು ಮಾತನಾಡಿ ಸಕಾದಲ್ಲಿ ಸಾರ್ವಜನಿಕರ ಕುಂದುಕೊರತೆಗಳಿಗೆ ಸ್ಪಂದಿಸಿ ಪರಿಹರಿಸಲು ಕ್ರಮ ತೆಗೆದುಕೊಂಡು ಎಲ್ಲಾ ಇಲಾಖೆಗೆಗಳು ಸಮನ್ವಯತೆಯಿಂದ ಕೆಲಸ ನಿರ್ವಹಿಸಲು ಸೂಚಿಸಿದರು ಹಾಗು ಹಾಜರಿದ್ದ ಸಾರ್ವಜನಿಕರಿಗೆ ಕಸ ವಿಲೇವಾರಿ ಬಗ್ಗೆ ಆದಷ್ಟು ಗಮನವಹಿಸಿ ಸಹಕರಿಸಿದಲ್ಲಿ ದಿನನಿತ್ಯದ ಕಸ ವಿಲೇವಾರಿ ಸಮಯದಲ್ಲಿ ಸಮರ್ಪಕವಾಗಿ ನಿರ್ವಹಿಸಲು ಗುತ್ತಿಗೆದಾರರು ಸಹಾಯವಾಗುತ್ತದೆ.

ಕಾರ್ಯದರ್ಶಿಯವರು ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸುತ್ತಾ ಮೇಲೆ ತಿಳಿಸಿರುವ ಎಲ್ಲಾ ಆಕ್ಷೇಪಣೆಗಳನ್ನು ಸಂಬಂಧಪಟ್ಟ ಇಲಾಖೆರವರಿಗೆ ತಿಳಿಸಿ ಕ್ರಮ ಕೈಗೊಳ್ಳಲು ಸೂಚಿಸಿರುತ್ತಾರೆ.

ನೋಡಲ್ ಅಧಿಕಾರಿರವರ ಸೂಚನೆಗಳಂತೆ ನಡವಳಿಗಳನ್ನು ತಯಾರಿಸಿ ಆನ್‌ಲೈನ್‌ನಲ್ಲಿ ಅಪ್‌ಲೋಡ್ ಮಾಡಲು ಸೂಚಿಸಿರುತ್ತಾರೆ.

(ಪ್ರವೀಣ್.ಎನ್.ಎಸ್)
**ಸ.ಅ&ಕಾರ್ಯದರ್ಶಿ**
**ವಾರ್ಡ್-91, ಭಾರತಿನಗರ**